**Akashvani : Bangalore**
**Regional Bulletin In Kannada**
**05.07.2026 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**05.07.2026 / 18.40 hrs**

---

ಮುಖ್ಯಾಂಶಗಳು

೧. ಸಂವಿಧಾನದ ಬಲವರ್ಧನೆಯ ಪರ ಸರ್ಕಾರ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೨. ಕೇಂದ್ರ ಸರ್ಕಾರಕ್ಕೆ ಶೀಘ್ರದಲ್ಲೇ ರಾಜ್ಯ ಬರ ಪರಿಸ್ಥಿತಿಯ ವರದಿ ಸಲ್ಲಿಕೆ - ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಮಾಹಿತಿ

೩. ಭದ್ರಾ ಮೇಲ್ದಂಡೆ ಯೋಜನೆಯಿಂದ ೪ ಜಿಲ್ಲೆಗಳ ೧೨ ತಾಲೂಕುಗಳಿಗೆ ಅನುಕೂಲ - ಸಚಿವ ರಾಮಲಿಂಗಾರೆಡ್ಡಿ ವಿಶ್ವಾಸ

೪. ಎಸ್‌ಐಆರ್ ಪ್ರಕ್ರಿಯೆ ಗೊಂದಲ ನಿವಾರಣೆಗೆ ಕೇಂದ್ರ ಚುನಾವಣಾ ಆಯೋಗ ನೇತೃತ್ವದ ತನಿಖೆಗೆ ವಿಪಕ್ಷ ನಾಯಕ ಆರ್.ಅಶೋಕ ಆಗ್ರಹ

೫. ರಾಜ್ಯದಲ್ಲಿ ಮುಂಗಾರು ಚುರುಕು ; ಮುಂದಿನ ೬ ದಿನಗಳಲ್ಲಿ ಹಲವೆಡೆ ಮಳೆಯ ಮುನ್ಸೂಚನೆ

---

ಹೋರಾಟ ಹಾಗೂ ದನಿ ಎತ್ತುವುದನ್ನು ಪ್ರತಿಪಾದಿಸಿದ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಆಶಯ ಸಾಕಾರಗೊಳಿಸುವುದು ಇಂದಿನ ಅಗತ್ಯವಾಗಿದ್ದು, ಈ ನಿಟ್ಟಿನಲ್ಲಿ ಪ್ರಜಾ ಸೇವಾ ಇಲಾಖೆ ಸ್ಥಾಪಿಸುವ ಮೂಲಕ ಸಾರ್ವಜನಿಕರ ದೂರುಗಳನ್ನು ತ್ವರಿತವಾಗಿ ಆಲಿಸಿ, ಪರಿಹರಿಸಲು ಸರ್ಕಾರ ಕ್ರಮ ವಹಿಸುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಆವರಣದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ೧೪ ಅಡಿ ಎತ್ತರದ ಕಂಚಿನ ಪ್ರತಿಮೆಯನ್ನು ಅನಾವರಣಗೊಳಿಸಿ ನಂತರ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಸಂವಿಧಾನದ ಬಲವರ್ಧನೆಯ ಪರವಾಗಿದೆ. ಸರ್ಕಾರ ೬ನೇ ಗ್ಯಾರಂಟಿಯಾಗಿ ಆಸ್ತಿ ರಕ್ಷಣೆಗಳ ದಾಖಲೆಗೆ ಖಾತೆ, ಪೋಡಿ, ಭೂಮಿ ಗ್ಯಾರಂಟಿಯನ್ನು ನೀಡಲಾಗುತ್ತಿದೆ ಎಂದರು.

ಬೆಂಗಳೂರು ಗ್ರಾಮಾಂತರ ಸೇರಿದಂತೆ ಬಯಲು ಸೀಮೆಯ ಜಿಲ್ಲೆಯಲ್ಲಿ ಅಂತರ್ಜಲ ದಿನೇ ದಿನೇ ಬತ್ತುತ್ತಿದ್ದು, ಎತ್ತಿನ ಹೊಳೆ ಯೋಜನೆಯಿಂದ ನೀರು ನೀಡಲಾಗುತ್ತಿದೆ. ರಾಜ್ಯದ ಎಲ್ಲಾ ಕೆರೆಗಳ ಅಂತರ್ಜಲ ಹೆಚ್ಚಿಸಿ, ರೈತರ ಬದುಕನ್ನು ಹಸನು ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ರಾಜ್ಯದಲ್ಲಿ ಭೂಮಿ ನೀಡಿದ ರೈತರಿಗೆ ಗೌರವ ನೀಡಲು ಸ್ಮರಣೀಯ ಗೋಡೆ ನಿರ್ಮಾಣ ಮಾಡಿ ಜಮೀನು ನೀಡಿದವರ ಹೆಸರನ್ನು ಹಾಕಲಾಗುತ್ತಿದೆ. ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಜಾರಿ ಮಾಡುವ ಮೂಲಕ ಜನರ ಆಶೋತ್ತರಗಳನ್ನು ಈಡೇರಿಸಲಾಗುತ್ತಿದೆ ಎಂದು ತಿಳಿಸಿದರು.

ಧ್ವನಿ : ಡಿ.ಕೆ.ಶಿವಕುಮಾರ್  (೨೭ಸೆಕೆಂಡ್‌ಗಳು)

ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರಿಂದು ಚಿತ್ರದುರ್ಗದಲ್ಲಿ ಕಂದಾಯ ವಿಪತ್ತು ನಿರ್ವಹಣಾ ವಿಷಯಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.

ರಾಜ್ಯದ ಬರಪರಿಸ್ಥಿತಿಯ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಶೀಘ್ರದಲ್ಲೇ ಸಲ್ಲಿಸಲಾಗುವುದು ಹಾಗೂ ಎನ್‌ಡಿಆರ್‌ಎಫ್ ಹಣವನ್ನು ತಕ್ಷಣವೇ ಬಿಡುಗಡೆ ಮಾಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಕೇಂದ್ರದ ಎನ್‌ಡಿಆರ್‌ಎಫ್ ತಂಡ ರಾಜ್ಯಕ್ಕೆ ಬಂದು ಪರಿಶೀಲನೆ ನಡೆಸುವವರೆಗೂ ಕಾಯದೇ, ಬರಪರಿಸ್ಥಿತಿಯನ್ನು ಎದುರಿಸುವ ವಿಚಾರದಲ್ಲಿ ಜಿಲ್ಲಾಧಿಕಾರಿಗಳು ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸಹಕಾರ ನೀಡಬೇಕು ಹಾಗೂ ಪರಿಸ್ಥಿತಿಯನ್ನು ಸಮನ್ವಯದಿಂದ ಎದುರಿಸಬೇಕು ಎಂದು ಸೂಚನೆ ನೀಡಿರುವುದಾಗಿ ಉಪಮುಖ್ಯಮಂತ್ರಿ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

ಭದ್ರಾ ಮೇಲ್ದಂಡೆ ಯೋಜನೆಯಿಂದ ರಾಜ್ಯದ ೪ ಜಿಲ್ಲೆಗಳ ಒಟ್ಟು ೧೨ ತಾಲೂಕಿನ ಜನರಿಗೆ ಅನುಕೂಲವಾಗಲಿದೆ ಎಂದು ಜಲಸಂಪನ್ಮೂಲ ಸಚಿವ ರಾಮಲಿಂಗರೆಡ್ಡಿ ತಿಳಿಸಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯ ಕಡೂರು ಪಟ್ಟಣದಲ್ಲಿ ಇಂದು ಭದ್ರಾ ಮೆಲ್ದಂಡೆ ಯೋಜನೆ ಕಾಮಗಾರಿಗಳ ಪ್ರಗತಿ ಪರಿಶಿಲನೆ ಹಾಗೂ ರೈತರ ಅಹವಾಲುಗಳನ್ನು ಸ್ವೀಕರಿಸಿ ಮಾತನಾಡಿದ ಅವರು, ಈ ಯೋಜನೆಯಿಂದ ಚಿಕ್ಕಮಗಳೂರು, ತುಮಕೂರು, ಚಿತ್ರದುರ್ಗ, ದಾವಣಗೆರೆ ಜಿಲ್ಲೆಗಳ ಜನರ ಕುಡಿಯುವ ನೀರು, ಕೃಷಿ ಹಾಗೂ ಇತರೆ ಚಟುವಟಿಕೆಗಳಿಗೆ ಅನುಕೂಲವಾಗಲಿದೆ ಎಂದರು.

೫ ಲಕ್ಷದ ೬೭ ಹೆಕ್ಟೇರ್ ಕೃಷಿಗೆ ಸಹಾಯವಾಗಲಿದ್ದು, ಜೊತೆಗೆ ೩೬೭ ಕೆರೆಗಳನ್ನು ತುಂಬಿಸಬಹುದಾಗಿದೆ ಎಂದರು. ಯೋಜನೆಯ ಕಾಮಗಾರಿಗಳು ಹಂತಹಂತವಾಗಿ ನಡೆಯುತ್ತಿದೆ. ಕೆರೆ ತುಂಬಿಸುವ ಯೋಜನೆ ೩ನೇ ಹಂತ ಪ್ರಾರಂಭವಾಗಿದ್ದು, ೪ನೇ ಹಂತದ ಕೆರೆ ತುಂಬಿಸುವ ಯೋಜನೆ ಆರಂಭಕ್ಕೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ದೇಶದ ಭದ್ರತೆ ಮತ್ತು ರಾಜ್ಯದ ಸಂಪನ್ಮೂಲಗಳ ಹಿತದೃಷ್ಟಿಯಿಂದ ರಾಜ್ಯದಲ್ಲಿ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಯ ಗೊಂದಲದ ಕುರಿತು ಕೇಂದ್ರ ಚುನಾವಣಾ ಆಯೋಗ ಮಧ್ಯ ಪ್ರವೇಶಿಸಿ ತನಿಖೆ ನಡೆಸಬೇಕು ಎಂದು ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದ್ದಾರೆ.

ಬೆಂಗಳೂರಿನ ಪಕ್ಷದ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಪ್ರೇರಣೆಯನ್ನು ಅಧಿಕಾರಿಗಳು ಈ ಪ್ರಕ್ರಿಯೆಗೆ ಸರಿಯಾಗಿ ಸ್ಪಂದಿಸುತ್ತಿಲ್ಲ. ಹಾಗೂ ನಿಯಮ ಬಾಹಿರವಾಗಿ ಮಸೀದಿ, ಮದುವೆ ಮಂಟಪ ಮತ್ತು ರಸ್ತೆಗಳಲ್ಲಿ ದಾಖಲಾತಿ ಅರ್ಜಿಗಳನ್ನು ವಿತರಿಸುತ್ತಿದ್ದಾರೆ ಎಂದು ದೂರಿದ್ದಾರೆ.

ಇದರಿಂದಾಗಿ ರಾಜ್ಯದಲ್ಲಿರುವ ಸುಮಾರು ೨೦ ಲಕ್ಷಕ್ಕೂ ಹೆಚ್ಚು ಬಾಂಗ್ಲಾದೇಶದ ಅಕ್ರಮ ವಲಸಿಗರು ಮತಪಟ್ಟಿಗೆ ಸೇರ್ಪಡೆಯಾಗಿ ದೇಶದ ಸಂಪನ್ಮೂಲ ದುರುಪಯೋಗಪಡಿಸಿಕೊಳ್ಳುವ ಅಪಾಯವಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ರಾಜ್ಯದಲ್ಲೂ ಬೇರೆ ರಾಜ್ಯದ ಅಧಿಕಾರಿಗಳನ್ನು ನಿಯೋಜಿಸಿ ನ್ಯಾಯಾಂಗದ ಉಸ್ತುವಾರಿಯಲ್ಲಿ ಎಸ್‌ಐಆರ್ ಪ್ರಕ್ರಿಯೆ ನಡೆಸುವಂತೆ ಹಾಗೂ ನಿಯಮ ಉಲ್ಲಂಘಿಸುವ ಅಧಿಕಾರಿಗಳನ್ನು ಅಮಾನತುಗೊಳಿಸುವಂತೆ ಆಗ್ರಹಿಸಿದ್ದಾರೆ.

---

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಅಧ್ಯಕ್ಷತೆಯಲ್ಲಿ ಬೆಂಗಳೂರಿನ ಬಿಜೆಪಿ ರಾಜ್ಯ ಕಾರ್ಯಾಲಯ 'ಜಗನ್ನಾಥ ಭವನ'ದಲ್ಲಿಂದು ರಾಜ್ಯ ಪದಾಧಿಕಾರಿಗಳ ಸಭೆ ನಡೆಯಿತು.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಕಾಂಗ್ರೆಸ್ ಸರ್ಕಾರದಿಂದ ಆಗುತ್ತಿದೆ ಎನ್ನಲಾದ ಅಧಿಕಾರ ದುರ್ಬಳಕೆಯ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಇದೇ ವೇಳೆ ಪಕ್ಷವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಹಲವಾರು ನಿರ್ಧಾರಗಳನ್ನು ಕೈಗೊಳ್ಳಲಾಗಿದೆ.

ಈ ಸಂದರ್ಭದಲ್ಲಿ ರಾಜ್ಯ ಸಹ ಉಸ್ತುವಾರಿ ಸುಧಾಕರ್ ರೆಡ್ಡಿ, ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಪ್ರೀತಮ್ ಗೌಡ, ಪಿ.ರಾಜೀವ್ ಸೇರಿದಂತೆ ಪಕ್ಷದ ಶಾಸಕರು ಹಾಗೂ ರಾಜ್ಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

---

ಪ್ರಧಾನಿ ನರೇಂದ್ರ ಮೋದಿ ಅವರ ದೂರದರ್ಶಿ ನಾಯಕತ್ವದಡಿ ಕಾರ್ಯಸ್ಥಳಗಳಲ್ಲಿನ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದ್ದು, ಕಾರ್ಮಿಕರ ಅಪಘಾತಗಳ ಪ್ರಮಾಣ ಗಣನೀಯವಾಗಿ ಕುಸಿದಿದೆ ಎಂದು ಕೇಂದ್ರ ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ತಿಳಿಸಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಅವರು, ದೇಶದಲ್ಲಿ ಸುರಕ್ಷತಾ ಹಾಗೂ ಆರೋಗ್ಯಕರ ಕಾರ್ಯಸ್ಥಳಗಳನ್ನು ನಿರ್ಮಿಸುವ ಕೇಂದ್ರ ಸರ್ಕಾರದ ನಿರಂತರ ಪ್ರಯತ್ನದ ಫಲವಾಗಿ ಉದ್ಯೋಗದ ಅವಧಿಯಲ್ಲಿ ಸಂಭವಿಸುವ ಮಾರಣಾಂತಿಕ ಮತ್ತು ಇತರ ಗಾಯಗಳ ಪ್ರಮಾಣ ೨೦೧೬ರಲ್ಲಿ ಪ್ರತಿ ೧ ಲಕ್ಷ ಕಾರ್ಮಿಕರಿಗೆ ಶೇಕಡ ೩೭.೭೩ ರಷ್ಟಿತ್ತು. ಇದು ೨೦೨೩ರ ವೇಳೆ ೨೧.೪೨ ಪ್ರತಿಶತಕ್ಕೆ ಇಳಿಕೆಯಾಗಿದೆ ಎಂದು ಮಾಹಿತಿ ನೀಡಿದ್ದಾರೆ.

---

ಬೆಂಗಳೂರಿನಲ್ಲಿಂದು ನಡೆದ ಬೆಂಗಳೂರು ನಿರ್ಮಾತೃ, ನಾಡಪ್ರಭು ಕೆಂಪೇಗೌಡ ಅವರ ೫೧೬ನೇ ಜಯಂತ್ಯೋತ್ಸವ ಸಮಾರಂಭದಲ್ಲಿ ಕೇಂದ್ರ ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಪಾಲ್ಗೊಂಡು, ನಾಡಪ್ರಭು ಕೆಂಪೇಗೌಡ ಅವರಿಗೆ ಗೌರವನಮನ ಸಲ್ಲಿಸಿದ್ದರು.

---

ಇನ್ನು ಹವಾವರ್ತಮಾನ,

ರಾಜ್ಯದ ಒಳನಾಡಿನಲ್ಲಿ ನೈಋತ್ಯ ಮುಂಗಾರು ಸಕ್ರಿಯವಾಗಿದ್ದು, ಕರಾವಳಿ ಕರ್ನಾಟಕದಾದ್ಯಂತ ಸಾಮಾನ್ಯವಾಗಿತ್ತು. ಕರಾವಳಿಯ ಹೆಚ್ಚಿನ ಸ್ಥಳಗಳಲ್ಲಿ ಹಾಗೂ ಒಳನಾಡಿನ ಹಲವೆಡೆ ಮಳೆಯಾಗಿದೆ.

ಪ್ರಮುಖವಾಗಿ ಶಿವಮೊಗ್ಗ ಜಿಲ್ಲೆಯ ಆಗುಂಬೆಯಲ್ಲಿ ೧೫ ಸೆಂಟಿ ಮೀಟರ್, ಉತ್ತರಕನ್ನಡ ಜಿಲ್ಲೆಯ ಮಂಕಿಯಲ್ಲಿ ೧೩, ಗೇರುಸೊಪ್ಪದಲ್ಲಿ ೧೨ ಸೆಂಟಿ ಮೀಟರ್ ಮಳೆಯಾಗಿದೆ. ಇನ್ನು ಪೊನ್ನಂಪೇಟೆಯಲ್ಲಿ ೧೧, ಕಮ್ಮರಡಿ, ಶೃಂಗೇರಿ, ತಾಳಗೊಪ್ಪ, ಖಾನಾಪುರದಲ್ಲಿ ತಲಾ ೯, ಲೋಂಡಾದಲ್ಲಿ ೮ ಸೆಂಟಿಮೀಟರ್ ಮಳೆಯಾಗಿದೆ.

ಮುಂದಿನ ೬ ದಿನಗಳಲ್ಲಿ ಕರಾವಳಿಯ ಬಹುತೇಕ ಕಡೆ, ಮುಂದಿನ ೫ ದಿನಗಳವರೆಗೆ ಉತ್ತರ ಒಳನಾಡಿನ ಹಲವೆಡೆ ಹಾಗೂ ದಕ್ಷಿಣ ಒಳನಾಡಿನ ಕೆಲವೆಡೆ ಮಳೆಯಾಗಲಿದೆ.

ಇಂದಿನಿಂದ ಇದೇ ೯ರವರೆಗೆ ಕರಾವಳಿಯಲ್ಲಿ ಗಾಳಿ ೪೦ ರಿಂದ ೬೦ ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆಯಿರುವ ಹಿನ್ನೆಲೆ ಮೀನುಗಾರರಿಗೆ ಸಮುದ್ರಕ್ಕೆ ಇಳಿಯುವ ವೇಳೆ ಎಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಸುತ್ತಮುತ್ತ ಮೋಡ ಕವಿದ ವಾತಾವರಣ. ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ. ಗರಿಷ್ಠ ೨೮, ಕನಿಷ್ಠ ೨೦ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

---

ಕಳೆದ ಕೆಲವು ದಿನಗಳಿಂದ ಮುಂಗಾರು ಚುರುಕುಗೊಂಡಿರುವ ಹಿನ್ನೆಲೆಯಲ್ಲಿ ಘಟಪ್ರಭಾ ಹಾಗೂ ಹಿರಣ್ಯಕೇಶಿ ನದಿಗಳಿಗೆ ಒಳಹರಿವು ಕ್ಷಣಕ್ಷಣಕ್ಕೂ ಹೆಚ್ಚುತ್ತಿದ್ದು, ಸದ್ಯ ಜಲಾಶಯಕ್ಕೆ ಸುಮಾರು ೮ ಸಾವಿರ ಕ್ಯೂಸೆಕ್ ನೀರು ಹರಿದು ಬರುತ್ತಿದೆ. ಹೆಚ್ಚುವರಿ ನೀರನ್ನು ನದಿಗೆ ಹರಿಸಲಾಗುತ್ತಿದ್ದು, ಬೆಳಗಾವಿಯಿಂದ ಬಾಗಲಕೋಟೆವರೆಗೆ ನದಿಯ ಹರಿವು ಉತ್ತಮವಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ಬೆಳಗಾವಿ ಜಿಲ್ಲೆ ಘಟಪ್ರಭಾ ಜಲಾಶಯಕ್ಕೆ ಭೇಟಿ ನೀಡಿ, ಜಲಾಶಯದ ಪ್ರಸಕ್ತ ಪರಿಸ್ಥಿತಿ ಹಾಗೂ ಒಳಹರಿವಿನ ಸ್ಥಿತಿಗತಿಗಳನ್ನು ಪರಿಶೀಲಿಸಿ ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ಇಂದು ಬೆಳಿಗ್ಗೆಯಿಂದಲೇ ಘಟಪ್ರಭಾ ಎಡದಂಡೆ ಕಾಲುವೆಗೆ ೧ ಸಾವಿರ ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡಲಾಗಿದೆ. ಇದನ್ನು ೨ ಸಾವಿರ ಕ್ಯೂಸೆಕ್‌ಗೆ ಹೆಚ್ಚಿಸುವ ಮೂಲಕ ಸುಮಾರು ೨ ಲಕ್ಷ ಎಕರೆ ಕೃಷಿ ಭೂಮಿಗೆ ನೀರಾವರಿ ಸೌಲಭ್ಯ ದೊರೆತು, ರೈತರ ಕೃಷಿ ಚಟುವಟಿಕೆಗಳಿಗೆ ಹೆಚ್ಚಿನ ಅನುಕೂಲವಾಗಲಿದೆ.

ಮುಂದಿನ ದಿನಗಳಲ್ಲಿಯೂ ಜಲಾಶಯದ ನೀರಿನ ಮಟ್ಟ ಹಾಗೂ ಒಳಹರಿವಿನ ಮೇಲೆ ನಿರಂತರ ನಿಗಾವಹಿಸಿ, ರೈತರ ಹಿತದೃಷ್ಟಿಯಿಂದ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

___________ ಮುಕ್ತಾಯ __________